# ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

E-mail:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:ಪಿಯು/ಸಿಬ್ಬಂದಿ-2/ಎನ್‌ಒಸಿ/ಸಿಆರ್-5/03/2017-18 ದಿನಾಂಕ 24-06-2017.

**ಜ್ಞಾಪನ**

**ವಿಷಯ:** ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಕೆ.ಎ.ಎಸ್) ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಕುರಿತು.

**ಉಲ್ಲೇಖ:** ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ, ಇವರ ಪತ್ರ ದಿನಾಂಕ 09-06-2017.

****

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಕೆ.ಎ.ಎಸ್) ಹುದ್ದೆಗೆ ಕರ್ನಾಟಕ ಲೋಕಸೇವಾ ಆಯೋಗವು ಅರ್ಜಿಯನ್ನು ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪತ್ರ ನೀಡುವಂತೆ ಈ ಕೆಳಕಂಡ ಉಪನ್ಯಾಸಕರು ಜಿಲ್ಲಾ ಉಪ ನಿರ್ದೇಶಕರ ಮೂಲಕ ಮನವಿ ಸಲ್ಲಿಸಿರುತ್ತಾರೆ. ಸದರಿ ಉಪನ್ಯಾಸಕರ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿದೆ.

| ಕ್ರ ಸ | ಹೆಸರು ಮತ್ತು ಕಾಲೇಜು ವಿಳಾಸ ಶ್ರೀಮತಿ/ಶ್ರೀ | ಅನುಮತಿ ಕೋರಲಾದ ಹುದ್ದೆ |
|---|---|---|
| 1 | ಶೇಖರ್ ಜಿ.ಡಿ. ರಾಜ್ಯಶಾಸ್ತ್ರ ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಕೋಡಂಬಳ್ಳಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. | ಕರ್ನಾಟಕ ಲೋಕಸೇವಾ ಆಯೋಗವು ಆಹ್ವಾನಿಸಿರುವ ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಕೆ.ಎ.ಎಸ್) ಹುದ್ದೆ. |
| 2. | ಅನಿತ ಪಿ. ಭೂಗೋಳಶಾಸ್ತ್ರ ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಕೋಡಂಬಳ್ಳಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. | ಕರ್ನಾಟಕ ಲೋಕಸೇವಾ ಆಯೋಗವು ಆಹ್ವಾನಿಸಿರುವ ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಕೆ.ಎ.ಎಸ್) ಹುದ್ದೆ. |

**ಷರತ್ತುಗಳು:**

1. ಸದರಿ ಉಪನ್ಯಾಸಕರು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಉಪನ್ಯಾಸಕರುಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಸದರಿ ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಸದರಿ ಉಪನ್ಯಾಸಕರುಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
4. ಸದರಿ ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.
5. ಸದರಿ ಹುದ್ದೆಯಲ್ಲಿ ತೇರ್ಗಡೆ ಹೊಂದಿದಲ್ಲಿ ಗ್ರೂಪ್ ಬಿ ಹುದ್ದೆಯ(ಉಪನ್ಯಾಸಕ)ವೇತನ ರಕ್ಷಣೆಯನ್ನು ಇಲಾಖೆ ನೀಡುವುದಿಲ್ಲ.

24/6/17

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1. ಜಂಟಿ ನಿರ್ದೇಶಕರು (ಆಪ್ತಶಾಖೆ), ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
2. ಸಂಬಂಧಪಟ್ಟ ಸಿಬ್ಬಂದಿಯವರಿಗೆ. 3. ಕಛೇರಿ ಪ್ರತಿ.